ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ರಾಯಚೂರು ಜಿಲ್ಲೆಯಲ್ಲಿ ಬರುವ ರಾಜ್ಯ ಹೆದ್ದಾರಿಗಳ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-

367(431) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಎಸ್.ಎಚ್-20 ರಾಯಚೂರು ದಿಂದ ಲಿಂಗಸುಗೂರುವರೆಗೂ ಹಾಗೂ ಎಸ್.ಎಚ್-23 ಶಲ್ಮೀಲಾ ಕ್ರಾಸ್‌ದಿಂದ ಸಿಂಧನೂರವರೆಗೂ ರಸ್ತೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಸದರಿ ರಸ್ತೆ ಅಭಿವೃದ್ಧಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಮಾನ್ವಿ ತಾಲ್ಲೂಕು ಮುಸ್ತೂರು ಗ್ರಾಮದ ಹತ್ತಿರ ಸೇತುವೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿ ಬರುವ ಎಸ್.ಎಚ್-20 ಹಾಗೂ ಎಸ್.ಎಚ್-23 ಇವುಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?